# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 651(714)

ಮಾನ್ಯ ಸದಸ್ಯರ ಹೆಸರು: ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: 18.08.2025

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಖಾಸಗಿ ಸಂಸ್ಥೆಗಳಿಗೆ ಸಮನಾಗಿ ಸರ್ಕಾರಿ ಶಾಲೆಗಳಲ್ಲಿ ಕಲಿಕಾ ಫಲಿತಾಂಶಗಳು ಮತ್ತು ಬೋಧನಾ ಗುಣಮಟ್ಟವನ್ನು ಸುಧಾರಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ; | ಖಾಸಗಿ ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಮನಾಗಿ ಸರ್ಕಾರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-<br>1. 2019-20 ನೇ ಸಾಲಿನಿಂದ 2025-26ನೇ ಸಾಲಿನವರೆಗೆ ಒಟ್ಟು 8539 ದ್ವಿ-ಭಾಷಾ ಮಾಧ್ಯಮ ವಿಭಾಗಗಳನ್ನು ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 1ನೇ ತರಗತಿಯಿಂದ ಮಂಜೂರು ಮಾಡಲಾಗಿದೆ.<br>2. ದ್ವಿ-ಭಾಷಾ ಮಾಧ್ಯಮ ಶಾಲೆಗಳನ್ನು ನಿರ್ವಹಿಸಲು ಇಂಗ್ಲೀಷ್ ಭಾಷಾ ವಿಷಯದಲ್ಲಿ ಶಿಕ್ಷಕರಿಗೆ RIESI ಮೂಲಕ ವಿಶೇಷ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.<br>3. ಶಿಕ್ಷಕರ ಕೊರತೆಯನ್ನು ನಿವಾರಿಸಲು ಶಾಲೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಿಸಿಕೊಂಡು ಪಾಠ ಬೋಧನೆ ನಡೆಸಲಾಗುತ್ತಿದೆ.<br>4. 2024-25ನೇ ಸಾಲಿನಲ್ಲಿ ಮಹತ್ವಾಕಾಂಕ್ಷಿ ತಾಲ್ಲೂಕುಗಳಲ್ಲಿ 6 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಕಲಿಕಾ ನ್ಯೂನತೆಯನ್ನು ಸರಿಪಡಿಸಲು ಹಾಗೂ 10ನೇ ತರಗತಿಯ ಫಲಿತಾಂಶವನ್ನು ಗುಣಾತ್ಮಕವಾಗಿ ಹೆಚ್ಚಿಸಲು ಮರುಸಿಂಚನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. |

| | | |
|---|---|---|
| | | 5. 2024-25 ನೇ ಸಾಲಿನಲ್ಲಿ ಮಹತ್ವಾಕಾಂಕ್ಷಿ ತಾಲ್ಲೂಕುಗಳಲ್ಲಿ ಗಣಿತದ ಮೂಲ ಕ್ರಿಯೆಗಳನ್ನು 3 ರಿಂದ 5ನೇ ತರಗತಿಯ ವಿದ್ಯಾರ್ಥಿಗಳಲ್ಲಿ ವೃದ್ಧಿಸಲು ಗಣಿತ-ಗಣಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. |
| ಆ) | ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ಶಾಲೆ ಬಿಡುವ ಪ್ರಮಾಣವನ್ನು ಕಡಿಮೆ ಮಾಡಲು ಮತ್ತು ಒಟ್ಟು ದಾಖಲಾತಿ ಸುಧಾರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | **ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ಶಾಲೆ ಬಿಡುವ ಪ್ರಮಾಣವನ್ನು ಕಡಿಮೆ ಮಾಡಲು ಮತ್ತು ಒಟ್ಟು ದಾಖಲಾತಿ ಸುಧಾರಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-**<br>❖ ಪ್ರತಿ ವರ್ಷ ಶಾಲಾ ಹಂತದ ಸಮೀಕ್ಷೆಯಲ್ಲಿ ಗುರುತಿಸಲಾದ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಹತ್ತಿರದ ಶಾಲೆಗಳಲ್ಲಿ ವಿಶೇಷ ದಾಖಲಾತಿ ಆಂದೋಲನ ಹಾಗೂ ಸಾಮಾನ್ಯ ದಾಖಲಾತಿ ಆಂದೋಲನದ ಮೂಲಕ ಮುಖ್ಯವಾಹಿನಿಗೆ ತರಲಾಗುತ್ತಿದೆ. ಅವರಿಗೆ ಬ್ರಿಡ್ಜ್ ಕೋರ್ಸ್ ಮತ್ತು ಪರಿಹಾರ ಬೋಧನೆಯ ಮೂಲಕ ಶಾಲಾ ಆಧಾರಿತ ತರಬೇತಿ (SBT) ನೀಡಲಾಗುವುದು ಮತ್ತು ಈ ಮಕ್ಕಳನ್ನು ವಯೋಮಾನಕ್ಕನುಗುಣವಾಗಿ ತರಗತಿಗಳಿಗೆ ದಾಖಲಿಸಲಾಗುವುದು.<br>❖ ಶಾಲೆ ಬಿಡುವ ಮಕ್ಕಳ ಪ್ರಮಾಣವನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಶಾಲಾ ಪ್ರವೇಶಕ್ಕೆ ಅವಕಾಶವಿಲ್ಲದ ಪ್ರದೇಶಗಳಲ್ಲಿ ಹೊಸ ಸರ್ಕಾರಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ. ಜೊತೆಗೆ ಅಸ್ತಿತ್ವದಲ್ಲಿರುವ ಪ್ರಾಥಮಿಕ ಶಾಲೆಗಳನ್ನು ಪ್ರೌಢಶಾಲೆಗಳಿಗೆ ಮತ್ತು ಪ್ರೌಢಶಾಲೆ ಶಾಲೆಗಳನ್ನು ಪದವಿ ಪೂರ್ವ ಕಾಲೇಜುಗಳಿಗೆ ಉನ್ನತೀಕರಿಸಲಾಗುತ್ತಿದೆ. ಎಲ್ಲಾ ಮಕ್ಕಳಿಗೆ ಸಾರ್ವತ್ರಿಕ ಶಿಕ್ಷಣ ಪ್ರವೇಶಕ್ಕೆ ಅವಕಾಶ ಮಾಡಿಕೊಡುವ ನಿಟ್ಟಿನಲ್ಲಿ ಇದು ಒಂದು ನಿರ್ಣಾಯಕ ಹೆಜ್ಜೆಯಾಗಿದೆ. |

| | | |
|---|---|---|
| | | ❖ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು, ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿ (SDMC), ಕರ್ನಾಟಕ ಶಿಕ್ಷಕರ ಸಂಘ, ಬಿಬಿಎಂಪಿ ಮತ್ತು ಆಯಾ ಸ್ಥಳೀಯ ಸಂಸ್ಥೆಗಳು, ಗ್ರಾಮ ಪಂಚಾಯಿತಿಗಳು, ಕಾರ್ಮಿಕ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ, ಅನೇಕ ಸ್ವ-ಸಹಾಯ ಗುಂಪುಗಳು ಮತ್ತು ಎನ್‌ಜಿಒಗಳ ಸಹಭಾಗಿತ್ವ ಇಲಾಖೆ ಹಾಗೂ ಸಂಸ್ಥೆಗಳ ಸಹಯೋಗದಿಂದ ಶಾಲೆಯಿಂದ ಹೊರಗುಳಿದ ಹಾಗೂ ಶಾಲೆಗೆ ದಾಖಲಾಗದ ಮಕ್ಕಳನ್ನು ಗುರುತಿಸಿ, ಶೈಕ್ಷಣಿಕ ಮುಖ್ಯವಾಹಿನಿಗೆ ತರಲಾಗುತ್ತಿದೆ.<br><br>❖ RDPR, BBMP ಮತ್ತು UDD ಇಲಾಖೆಗಳ ಸಹಯೋಗದೊಂದಿಗೆ 6-18 ವಯೋಮಾನದ ಶಾಲೆಯಿಂದ ಹೊರಗುಳಿದ ಹಾಗೂ ಶಾಲೆಗೆ ದಾಖಲಾಗದ ಮಕ್ಕಳನ್ನು ಗುರುತಿಸಲು ಮನೆ-ಮನೆ ಸಮೀಕ್ಷೆಯನ್ನು ನಡೆಸಲು EDCS ವತಿಯಿಂದ ಮೊಬೈಲ್ ಅಪ್ಲಿಕೇಶನ್ ಅನ್ನು ಅಭಿವೃದ್ಧಿಪಡಿಸಿದೆ.<br><br>❖ ಸಮೀಕ್ಷೆಯಲ್ಲಿ ಗುರುತಿಸಲಾದ ಬೀದಿ ಮಕ್ಕಳು, ಚಿಂದಿ ಆಯುವವರು, ಬಾಲ ಕಾರ್ಮಿಕರು, ಅನಾರೋಗ್ಯ ಪೀಡಿತ ಮಕ್ಕಳು, ವಿಶೇಷ ಅಗತ್ಯವಿರುವ ಮಕ್ಕಳು, ಅನಾಥರು, ಇತರ ರಾಜ್ಯಗಳು ಅಥವಾ ಜಿಲ್ಲೆಗಳಿಂದ ವಲಸೆ ಬಂದ ಮಕ್ಕಳಿಗೆ ವಿಶೇಷ ತರಬೇತಿ ನೀಡಿ ಕಲಿಕೆಯ ಮಟ್ಟವನ್ನು ಆಧರಿಸಿ ನೇತಾಜಿ ಅವಾಸಿಯ ವಿದ್ಯಾಲಯ, ಚಿಣ್ಣರ ತಂಗುಧಾಮ(Transit Homes), ಕೆಜಿಬಿವಿ ವಸತಿ ಶಾಲೆಗಳು, ಕೆಕೆಜಿಬಿವಿ(Hostels) ವಸತಿ ನಿಲಯಗಳಲ್ಲಿ ದಾಖಲಿಸಲಾಗುವುದು. |

| | | |
|---|---|---|
| | | ❖ ವಿಶೇಷ ಅಗತ್ಯವಿರುವ ಶಾಲೆಯಿಂದ ಹೊರಗುಳಿದ ಮಕ್ಕಳಿಗೆ (CwSN) ವಿಶೇಷ ಶಿಕ್ಷಕರ ಬೆಂಬಲವನ್ನು ಒದಗಿಸಲಾಗುತ್ತಿದೆ. ಅಂಗವೈಕಲ್ಯದ ಆಧಾರದ ಮೇಲೆ ವಿದ್ಯಾರ್ಥಿ ನಿರ್ದಿಷ್ಟ ಭತ್ಯೆಗಳಾದ ಸಾರಿಗೆ ಭತ್ಯೆ, ಬೆಂಗಾವಲು ಭತ್ಯೆ, ಓದುಗರ ಭತ್ಯೆ ಮತ್ತು ಹೆಣ್ಣು ಮಕ್ಕಳ ಭತ್ಯೆಯನ್ನು ಒದಗಿಸಲಾಗುತ್ತಿದೆ. ತೀವ್ರ ಅಂಗವೈಕಲ್ಯ ಅಥವಾ ತೀವ್ರ ಲೊಕೊ ಮೋಟಾರ್ ಅಂಗವೈಕಲ್ಯದ ಸಂದರ್ಭದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಅಗತ್ಯ ಕೌಶಲ್ಯ ತರಬೇತಿಯೊಂದಿಗೆ ಮನೆ ಆಧಾರಿತ ಶಿಕ್ಷಣವನ್ನು ಒದಗಿಸಲಾಗುವುದು.<br><br>❖ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು "ವಲಸೆ ಮಕ್ಕಳು ಮತ್ತು ವಲಸೆ ಕಾರ್ಮಿಕರ ಮಕ್ಕಳ ಶಿಕ್ಷಣ ಹಕ್ಕು ನೀತಿ - 2019" ರೂಪಿಸಿದೆ. ದೇಶದಲ್ಲಿ ಸದರಿ ನೀತಿಯನ್ನು ರಚಿಸಿರುವ ಮೊದಲನೇ ರಾಜ್ಯ ಕರ್ನಾಟಕವಾಗಿದೆ.<br><br>❖ ಕರ್ನಾಟಕ ರಾಜ್ಯದಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳ ಶಾಲೆ ಬಿಡುವ ಅವಧಿಯನ್ನು 60 ದಿನಗಳ ಬದಲಿಗೆ 7 ದಿನಗಳು ಎಂದು ಪರಿಗಣಿಸಲಾಗುತ್ತದೆ. ಪ್ರತಿ ಶೈಕ್ಷಣಿಕ ಬ್ಲಾಕ್‌ನಲ್ಲಿ 4 ರಿಂದ 5 ಹಾಜರಾತಿ ಅಧಿಕಾರಿಗಳನ್ನು (ಶಿಕ್ಷಣ ಸಂಯೋಜಕರು) ನೇಮಕ ಮಾಡಲಾಗಿದೆ. ಕರ್ನಾಟಕ ರಾಜ್ಯದಲ್ಲಿ 204 ಶೈಕ್ಷಣಿಕ ಬ್ಲಾಕ್‌ಗಳಿವೆ. ಪ್ರತಿಯೊಬ್ಬ ಹಾಜರಾತಿ ಅಧಿಕಾರಿಯು ಅವರ ಹೋಬಳಿ ವ್ಯಾಪ್ತಿ ಅಡಿಯಲ್ಲಿರುವ ಶಾಲೆಗಳಿಗೆ ಜವಾಬ್ದಾರರಾಗಿರುತ್ತಾರೆ. ಶಾಲೆಯಲ್ಲಿ ಮಕ್ಕಳ ಹಾಜರಾತಿ ಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಾರೆ. RTE ನಿಯಮ 2009 6A, 6B, 6C ಮತ್ತು 6D ಪ್ರಕಾರ ಕ್ರಮ ಕೈಗೊಳ್ಳಲಾಗುತ್ತದೆ. |

| | | |
|---|---|---|
| | | ❖ 2024-25ನೇ ಸಾಲಿಗೆ, RTE ನಿಯಮ 6A, 6B,, 6C ಮತ್ತು 6D ಪಕಾರ ರಾಜ್ಯದ ಬ್ಲಾಕ್ ಸಂಪನ್ಮೂಲ ವ್ಯಕ್ತಿಗಳು, ಹಾಜರಾತಿ ಅಧಿಕಾರಿಗಳು (ಶಿಕ್ಷಣ ಸಂಯೋಜಕರು), ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳಿಗೆ ಕಾರ್ಯಕ್ರಮವನ್ನು ಒದಗಿಸಲಾಗಿದೆ.<br>❖ ಶಾಲೆಯಿಂದ ಹೊರಗುಳಿದ ಮತ್ತು ಶಾಲೆಗೆ ದಾಖಲಾಗದ ಮಕ್ಕಳನ್ನು ಮುಖ್ಯ ವಾಹಿನಿಗೆ ತರಲು ಜಿಲ್ಲಾ ಮತ್ತು ತಾಲ್ಲೂಕು ಹಂತದಲ್ಲಿ ಮಕ್ಕಳ ಕಲ್ಯಾಣ ಸಮಿತಿಗಳನ್ನು ರಚಿಸಲಾಗಿದೆ.<br>❖ ಶಾಲೆಯಿಂದ ಹೊರಗುಳಿದ ಮತ್ತು ಶಾಲೆಗೆ ದಾಖಲಾಗದ ಮಕ್ಕಳನ್ನು ಶಿಕ್ಷಣದ ಮುಖ್ಯ ವಾಹಿನಿಗೆ ತರಲು ಕರ್ನಾಟಕದ ಘನ ಉಚ್ಚ ನ್ಯಾಯಾಲಯದ ನಿರ್ದೇಶನಗಳ ಪ್ರಕಾರ ಅಂತರ ಇಲಾಖಾ ಸಮನ್ವಯ ಸಮಿತಿಯನ್ನು ಸ್ಥಾಪಿಸಲಾಗಿದೆ. ಈ ಸಮಿತಿಯ ಅಡಿಯಲ್ಲಿ ಶಾಲಾ ಶಿಕ್ಷಣ, ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬಿಬಿಎಂಪಿ ಮತ್ತು ಕಾರ್ಮಿಕ ಇಲಾಖೆಗಳು ಸಮಿತಿಯಲ್ಲಿ ಸೇರಿರುತ್ತಾರೆ. ಸದರಿ ಸಮಿತಿಯ ಅಧ್ಯಕ್ಷರು ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು ಆಗಿದ್ದು, ಅವರ ಅಧ್ಯಕ್ಷತೆಯಲ್ಲಿ ತ್ರೈಮಾಸಿಕ ಸಭೆ ನಡೆಸಲಾಗುತ್ತಿದೆ. ಸಭೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳಿಗೆ ಸಂಬಂಧಿಸಿದ ವಿವಿಧ ಸಮಸ್ಯೆಗಳನ್ನು ಚರ್ಚಿಸಲಾಗುವುದು.<br>❖ ಮಕ್ಕಳ ಹಾಜರಾತಿಯನ್ನು ಉತ್ತೇಜಿಸಲು, ಇಲಾಖೆಯು ವಿದ್ಯಾ ವಿಕಾಸ ಕಾರ್ಯಕ್ರಮದ ಅಡಿಯಲ್ಲಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಮಧ್ಯಾಹ್ನದ ಬಿಸಿ ಊಟ, ಹಾಲು, ಮೊಟ್ಟೆ, |

ಬಾಳೆಹಣ್ಣು, ಪಠ್ಯ ಪುಸ್ತಕಗಳು, Work Book, ಟಿಎಲ್ಎಂ, ಶೂ-ಸಾಕ್ಸ್, ಎರಡು ಸೆಟ್ ಸಮವಸ್ತ್ರಗಳು ಮತ್ತು Vitamin ಮಾತ್ರೆಗಳು ಮುಂತಾದ ಸೌಲಭ್ಯಗಳನ್ನು ಒದಗಿಸುತ್ತಿದೆ.

- ❖ ಶಾಲೆಗಳಲ್ಲಿ ಮಕ್ಕಳನ್ನು ಉಳಿಸಿಕೊಳ್ಳಲು ಪ್ರತಿಭಾ ಕಾರಂಜಿ ಕಾರ್ಯಕ್ರಮದಡಿಯಲ್ಲಿ ಶಾಲೆಗಳಲ್ಲಿರುವ ಎಲ್ಲಾ ಮಕ್ಕಳು ವಿವಿಧ ಹಂತಗಳಲ್ಲಿ ಶೈಕ್ಷಣಿಕ, ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಪ್ರೋತ್ಸಾಹಿಸಲಾಗುತ್ತದೆ.
- ❖ ಆರ್‌ಟಿಇ, ಅಧಿನಿಯಮ ಮತ್ತು ನಿಯಮಗಳ 2009ರ ಪ್ರಕಾರ, ಸ್ಥಳೀಯ ಸಂಸ್ಥೆಗಳು ತಮ್ಮ ಮಿತಿಯಲ್ಲಿ ವಾಸಿಸುವ ಎಲ್ಲಾ ಮಕ್ಕಳಿಗೆ ಶಿಕ್ಷಣ ನೀಡುವ ಜವಾಬ್ದಾರಿಯನ್ನು ತೆಗೆದುಕೊಳ್ಳುವುದನ್ನು ಖಚಿತಪಡಿಸಿಕೊಳ್ಳಲು ಗ್ರಾಮ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳು VER (ಗ್ರಾಮ ಶಿಕ್ಷಣ ವಹಿ) / WER ವಾರ್ಡ್ ಶಿಕ್ಷಣ ವಹಿ) ಅನ್ನು ನಿರ್ವಹಿಸುವ ಜವಾಬ್ದಾರಿಯನ್ನು ಹೊಂದಿವೆ.
- ❖ ಪ್ರತಿ ವರ್ಷ ಶಿಕ್ಷಣ ಮಂತ್ರಾಲಯದಿಂದ PAB ಯಲ್ಲಿ ಅನುಮೋದಿತ ಕಾರ್ಯಕ್ರಮದ ಅಡಿಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ತರಲು 3/6/9/12 ತಿಂಗಳ ವಸತಿರಹಿತ ಹಾಗೂ ವಸತಿಸಹಿತ ವಿಶೇಷ ತರಬೇತಿಗಳನ್ನು ಆಯೋಜಿಸಲಾಗುವುದು.
- ❖ 16 ರಿಂದ 19 ವಯೋಮಾನದ ಶಾಲೆಯಿಂದ ಹೊರಗುಳಿದ ಹಾಗೂ ದಾಖಲಾಗದ ಮಕ್ಕಳಿಗೆ ರಾಷ್ಟ್ರೀಯ ಮುಕ್ತ ಶಾಲಾ ವ್ಯವಸ್ಥೆಯ (NIOS) ಮೂಲಕ ಪರೀಕ್ಷೆಗೆ ನೋಂದಣಿ ಮಾಡಲು ರಾಜ್ಯದ KPS ಶಾಲೆಗಳು ಮತ್ತು ಜೂನಿಯರ್ ಕಾಲೇಜುಗಳಲ್ಲಿ ಒಟ್ಟು 220 ಅಧ್ಯಯನ ಕೇಂದ್ರಗಳನ್ನು ಗುರುತಿಸಲಾಗಿದೆ.

| | | |
|---|---|---|
| | | ❖ ಶಾಲೆಯಿಂದ ಹೊರಗುಳಿದ ಮತ್ತು ಶಾಲೆಗೆ ದಾಖಲಾಗದ ಮಕ್ಕಳನ್ನು ಗುರುತಿಸುವ, ದಾಖಲಿಸುವ ಮತ್ತು ಶೈಕ್ಷಣಿಕ ಮುಖ್ಯ ವಾಹಿನಿಗೆ ತರುವ ಕಾರ್ಯವು ನಿರಂತರ ಪ್ರಕ್ರಿಯೆಯಾಗಿದ್ದು, ಈ ಸಂಬಂಧ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ. |
| ಇ) | ಸರ್ಕಾರಿ ಶಾಲಾ ಮೂಲಸೌಕರ್ಯ ಮತ್ತು ಶೈಕ್ಷಣಿಕ ಪ್ರಗತಿಯನ್ನು ಖಾಸಗಿ ಶಾಲೆಗಳಿಗೆ ಸಮಾನವಾಗಿ ತರಲು, ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಮಾರ್ಗಸೂಚಿಯನ್ನು ರೂಪಿಸಲಾಗಿದೆಯೇ; | ರಾಜ್ಯ ವಲಯ ಯೋಜನೆಯಡಿ ಕಳೆದ ಸಾಲುಗಳಲ್ಲಿ ಸರ್ಕಾರಿ ಶಾಲೆಗಳಿಗೆ ಹೊಸ ಕೊಠಡಿಗಳ ನಿರ್ಮಾಣ, ಕೊಠಡಿಗಳ ದುರಸ್ತಿ ಕಾಮಗಾರಿಗಳಿಗೆ ಮತ್ತು ಶೌಚಾಲಯ ನಿರ್ಮಾಣಕ್ಕಾಗಿ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿದೆ.<br>❖ 2024-25 ನೇ ಸಾಲಿಗೆ ಸರ್ಕಾರಿ ಶಾಲೆಗಳಲ್ಲಿ 784 ಹೊಸ ಕೊಠಡಿಗಳನ್ನು ನಿರ್ಮಾಣ ಮಾಡಲು ರೂ. 11529.65 ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ. ಹಾಗೂ ರೂ. 10362.47 ಲಕ್ಷಗಳು ಬಿಡುಗಡೆಯಾಗಿರುತ್ತದೆ.<br>❖ 2024-25 ನೇ ಸಾಲಿಗೆ ಮಂಜೂರಾದ ಒಟ್ಟು 5744 ಸರ್ಕಾರಿ ಶಾಲೆಗಳ ಕೊಠಡಿಗಳ ದುರಸ್ತಿ ಕಾಮಗಾರಿಗಳಿಗೆ ಒಟ್ಟು ರೂ. 15129.66 ಲಕ್ಷಗಳ ಅನುದಾನ ಮಂಜೂರಾಗಿದ್ದು, ರೂ. 15129.66 ಲಕ್ಷಗಳ ಅನುದಾನ ಮಂಜೂರಾಗಿದ್ದು ರೂ 15129.66 ಅನುದಾನ ಬಿಡುಗಡೆಯಾಗಿರುತ್ತದೆ.<br>❖ 2024-25ನೇ ಸಾಲಿಗೆ ನರೇಗಾ ಸಹಯೋಗದೊಂದಿಗೆ ಒಟ್ಟು 7650 ಶಾಲಾ ಶೌಚಾಲಯ ನಿರ್ಮಾಣಕ್ಕೆ ಒಟ್ಟು ರೂ 23606.05 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ.<br>❖ ಮುಂದುವರೆದು, ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಅನುದಾನದ ಲಭ್ಯತೆಯನ್ನು |
| ಈ) | ಅಲ್ಪಸಂಖ್ಯಾತ ಮತ್ತು ಸಾಮಾಜಿಕವಾಗಿ ಹಿಂದುಳಿದ ಸಮುದಾಯಗಳ ಮಕ್ಕಳ ದಾಖಲಾತಿ ಸುಧಾರಿಸಲು ಇಲಾಖೆ ವಿಶೇಷ ಕ್ರಮಗಳನ್ನು ಪ್ರಾರಂಭಿಸಿದೆಯೇ? | |

| | | | |
|---|---|---|---|
| | | | ಆಧರಿಸಿ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಲಭ್ಯ ಅವಶ್ಯಕತೆ ಇರುವ ಕಡೆ ಆದ್ಯತೆಯ ಮೇರೆಗೆ ಹಂತ ಹಂತವಾಗಿ ನೀಡಲು ಕ್ರಮ ವಹಿಸಿದೆ. |

**ಇಪಿ 96 ಪಿಎಂಎ 2025**

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು